# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : **239 (2287)** |
| ಉತ್ತರಿಸಬೇಕಾದ ದಿನಾಂಕ | : 26.03.2026 |
| ಸದಸ್ಯರ ಹೆಸರು | : ಶ್ರೀಮತಿ ಬಲ್ಕೀಸ್ ಬಾನು<br>(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಕ್ರೀಡಾ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)</td><td>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿ ರಾಜ್ಯಾದ್ಯಂತ ಒಟ್ಟು 32 ಕ್ರೀಡಾ ವಸತಿ ನಿಲಯಗಳು ಹಾಗೂ 02 ಕ್ರೀಡಾ ವಸತಿ ಶಾಲೆಗಳು ಕಾರ್ಯ ನಿರ್ವಹಿಸುತ್ತಿದ್ದು, ಜಿಲ್ಲಾವಾರು ವಿವರಗಳನ್ನು ಅನುಬಂಧ-1ರಲ್ಲಿ ನೀಡ ಲಾಗಿದೆ.</td></tr>
<tr><td>ಆ</td><td>ವಿದ್ಯಾರ್ಥಿಗಳಲ್ಲಿ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)</td><td>ರಾಜ್ಯದ ವಿದ್ಯಾರ್ಥಿಗಳಲ್ಲಿ ಕ್ರೀಡೆಯನ್ನು ಪ್ರೋತ್ಸಾಹಿಸಲು ಸರ್ಕಾರವು ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ.</td></tr>
<tr><td>ಇ</td><td>ವಿದ್ಯಾರ್ಥಿಗಳಲ್ಲಿ ಕ್ರೀಡೆಗಳನ್ನು ಪ್ರೋತ್ಸಾಹಿಸಲು ಯಾವುದಾದರೂ ನೂತನ ಯೋಜನೆಗಳ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)</td><td>ರಾಜ್ಯದ ವಿದ್ಯಾರ್ಥಿಗಳಲ್ಲಿ ಕ್ರೀಡೆಗಳನ್ನು ಪ್ರೋತ್ಸಾಹಿಸಲು 2025-26ನೇ ಸಾಲಿನ ನೂತನ ಯೋಜನೆಗಳ ವಿವರಗಳನ್ನು ಅನುಬಂಧ-3ರಲ್ಲಿ ನೀಡಲಾಗಿದೆ.</td></tr>
<tr><td>ಈ</td><td>ಶಿವಮೊಗ್ಗ ಜಿಲ್ಲೆಯ ವ್ಯಾಪ್ತಿಯಲ್ಲಿ ಹೊಸದಾಗಿ ಸರ್ಕಾರಿ ಕ್ರೀಡಾ ವಸತಿ ಶಾಲೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಸರ್ಕಾರದ ಕ್ರಮವೇನು?</td><td>ಶಿವಮೊಗ್ಗದ ನೆಹರು ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಬಾಲಕ ಮತ್ತು ಬಾಲಕಿಯರ ಪ್ರತ್ಯೇಕ ಜಿಲ್ಲಾ ಕ್ರೀಡಾ ವಸತಿ ನಿಲಯ ಕಾರ್ಯನಿರ್ವಹಿಸುತ್ತಿದೆ. ಹೊಸದಾಗಿ ಸರ್ಕಾರಿ ಕ್ರೀಡಾ ವಸತಿ ಶಾಲೆ ಪ್ರಾರಂಭಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ.<br><br>ಶಿವಮೊಗ್ಗ ಕ್ರೀಡಾ ವಸತಿ ನಿಲಯದ ಅಥ್ಲೆಟಿಕ್ಸ್ ಕ್ರೀಡೆಯ ವಿಭಾಗದಲ್ಲಿ 53, ಹಾಕಿ ಕ್ರೀಡೆಯ ವಿಭಾಗದಲ್ಲಿ 24 ಹಾಗೂ ಕುಸ್ತಿ ಕ್ರೀಡೆಯ ವಿಭಾಗದಲ್ಲಿ 27 ಹಾಗೂ ವಾಲಿಬಾಲ್ ವಿಭಾಗದಲ್ಲಿ 02 ಒಟ್ಟು 106 ಕ್ರೀಡಾಪಟುಗಳು ಕ್ರೀಡಾ ತರಬೇತಿ ಪಡೆಯುತ್ತಿದ್ದು, ಬಾಲಕ ಹಾಗೂ ಬಾಲಕಿಯರ ವಿವರಗಳು ಕೆಳಕಂಡಂತೆ:<br><br>
<table>
<tr><th>ಕ್ರೀಡೆ</th><th>ಬಾಲಕ</th><th>ಬಾಲಕಿಯರು</th></tr>
<tr><td>ಕುಸ್ತಿ</td><td>27</td><td>0</td></tr>
<tr><td>ಹಾಕಿ</td><td>18</td><td>6</td></tr>
<tr><td>ಅಥ್ಲೆಟಿಕ್ಸ್</td><td>25</td><td>28</td></tr>
<tr><td>ವಾಲಿಬಾಲ್</td><td>2</td><td>0</td></tr>
</table></td></tr>
</table>

**ವೈಎಸ್‌ಡಿ-ಸಿಡಿಎಸ್/147/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ

## ಅನುಬಂಧ-1

## ರಾಜ್ಯದಲ್ಲಿರುವ ಕ್ರೀಡಾ ವಸತಿ ಶಾಲೆ/ನಿಲಯಗಳ ಜಿಲ್ಲಾವಾರು ವಿವರ

| ಕ್ರ.ಸಂ. | ಜಿಲ್ಲೆ | ಕ್ರೀಡಾ ಶಾಲೆ/ವಸತಿ ನಿಲಯ |
|---|---|---|
| 1 | ಬೆಂಗಳೂರು ನಗರ ಜಿಲ್ಲೆ | ಕ್ರೀಡಾ ವಸತಿ ನಿಲಯ, ಶ್ರೀ ಕಂಠೀರವ ಕ್ರೀಡಾಂಗಣ, ಬೆಂಗಳೂರು |
| 2 | ಬೆಂಗಳೂರು ನಗರ ಜಿಲ್ಲೆ | ಕ್ರೀಡಾ ವಸತಿ ಶಾಲೆ, ಶ್ರೀ ಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಯುವಜನ ತರಬೇತಿ ಕೇಂದ್ರ, ವಿದ್ಯಾನಗರ, ಬೆಂಗಳೂರು ಉತ್ತರ ತಾಲ್ಲೂಕು |
| 3 | ಮೈಸೂರು ಜಿಲ್ಲೆ | ಕ್ರೀಡಾ ವಸತಿ ನಿಲಯ, ಮೈಸೂರು |
| 4 | ಕೊಡಗು ಜಿಲ್ಲೆ | ಕ್ರೀಡಾ ವಸತಿ ಶಾಲೆ, ಕೂಡಿಗೆ |
| 5 | ಕೊಡಗು ಜಿಲ್ಲೆ | ಕ್ರೀಡಾ ವಸತಿ ನಿಲಯ, ಮಡಿಕೇರಿ |
| 6 | ಕೊಡಗು ಜಿಲ್ಲೆ | ಕ್ರೀಡಾ ವಸತಿ ನಿಲಯ, ಪೊನ್ನಂಪೇಟೆ |
| 7 | ಬೆಳಗಾವಿ ಜಿಲ್ಲೆ | ಕ್ರೀಡಾ ವಸತಿ ನಿಲಯ, ಬೆಳಗಾವಿ |
| 8 | ದಾವಣಗೆರೆ ಜಿಲ್ಲೆ | ಕ್ರೀಡಾ ವಸತಿ ನಿಲಯ, ದಾವಣಗೆರೆ |
| 9 | ಚಿಕ್ಕಮಗಳೂರು ಜಿಲ್ಲೆ | ಕ್ರೀಡಾ ವಸತಿ ನಿಲಯ, ಚಿಕ್ಕಮಗಳೂರು |
| 10 | ಹಾವೇರಿ ಜಿಲ್ಲೆ | ಕ್ರೀಡಾ ವಸತಿ ನಿಲಯ, ಹಾವೇರಿ |
| 11 | ಮಂಡ್ಯ ಜಿಲ್ಲೆ | ಕ್ರೀಡಾ ವಸತಿ ನಿಲಯ, ಮಂಡ್ಯ |
| 12 | ದಕ್ಷಿಣ ಕನ್ನಡ ಜಿಲ್ಲೆ | ಕ್ರೀಡಾ ವಸತಿ ನಿಲಯ, ಮಂಗಳೂರು |
| 13 | ರಾಮನಗರ ಜಿಲ್ಲೆ | ಕ್ರೀಡಾ ವಸತಿ ನಿಲಯ, ರಾಮನಗರ |
| 14 | ಶಿವಮೊಗ್ಗ ಜಿಲ್ಲೆ | ಕ್ರೀಡಾ ವಸತಿ ನಿಲಯ, ಶಿವಮೊಗ್ಗ |
| 15 | ಚಿತ್ರದುರ್ಗ ಜಿಲ್ಲೆ | ಕ್ರೀಡಾ ವಸತಿ ನಿಲಯ, ಚಿತ್ರದುರ್ಗ |
| 16 | ಉಡುಪಿ ಜಿಲ್ಲೆ | ಕ್ರೀಡಾ ವಸತಿ ನಿಲಯ, ಉಡುಪಿ |
| 17 | ಧಾರವಾಡ ಜಿಲ್ಲೆ | ಕ್ರೀಡಾ ವಸತಿ ನಿಲಯ, ಧಾರವಾಡ |
| 18 | ಕಲಬುರ್ಗಿ ಜಿಲ್ಲೆ | ಕ್ರೀಡಾ ವಸತಿ ನಿಲಯ, ಕಲಬುರ್ಗಿ |
| 19 | ಬಳ್ಳಾರಿ ಜಿಲ್ಲೆ | ಕ್ರೀಡಾ ವಸತಿ ನಿಲಯ, ಬಳ್ಳಾರಿ |
| 20 | ಕೊಪ್ಪಳ ಜಿಲ್ಲೆ | ಕ್ರೀಡಾ ವಸತಿ ನಿಲಯ, ಕೊಪ್ಪಳ |
| 21 | ರಾಯಚೂರು ಜಿಲ್ಲೆ | ಕ್ರೀಡಾ ವಸತಿ ನಿಲಯ, ರಾಯಚೂರು |
| 22 | ಹಾಸನ ಜಿಲ್ಲೆ | ಕ್ರೀಡಾ ವಸತಿ ನಿಲಯ, ಹಾಸನ |
| 23 | ಚಿಕ್ಕಬಳ್ಳಾಪುರ ಜಿಲ್ಲೆ | ಕ್ರೀಡಾ ವಸತಿ ನಿಲಯ, ಚಿಕ್ಕಬಳ್ಳಾಪುರ |
| 24 | ಬಾಗಲಕೋಟೆ ಜಿಲ್ಲೆ | ಕ್ರೀಡಾ ವಸತಿ ನಿಲಯ, ಬಾಗಲಕೋಟೆ |
| 25 | ಉತ್ತರ ಕನ್ನಡ ಜಿಲ್ಲೆ | ಕ್ರೀಡಾ ವಸತಿ ನಿಲಯ, ಕಾರವಾರ |
| 26 | ಉತ್ತರ ಕನ್ನಡ ಜಿಲ್ಲೆ | ಕ್ರೀಡಾ ವಸತಿ ನಿಲಯ, ಹಳಿಯಾಳ |
| 27 | ಚಾಮರಾಜನಗರ ಜಿಲ್ಲೆ | ಕ್ರೀಡಾ ವಸತಿ ನಿಲಯ, ಚಾಮರಾಜನಗರ |
| 28 | ಚಾಮರಾಜನಗರ ಜಿಲ್ಲೆ | ಕ್ರೀಡಾ ವಸತಿ ನಿಲಯ, ಸಂತೆಮರಳ್ಳಿ, |
| 29 | ಕೋಲಾರ ಜಿಲ್ಲೆ | ಕ್ರೀಡಾ ವಸತಿ ನಿಲಯ, ಕೋಲಾರ |
| 30 | ಬೀದರ್ ಜಿಲ್ಲೆ | ಕ್ರೀಡಾ ವಸತಿ ನಿಲಯ, ಬೀದರ್ |
| 31 | ತುಮಕೂರು ಜಿಲ್ಲೆ | ಕ್ರೀಡಾ ವಸತಿ ನಿಲಯ, ತುಮಕೂರು |
| 32 | ಯಾದಗಿರಿ ಜಿಲ್ಲೆ | ಕ್ರೀಡಾ ವಸತಿ ನಿಲಯ, ಯಾದಗಿರಿ |
| 33 | ವಿಜಯಪುರ ಜಿಲ್ಲೆ | ಕ್ರೀಡಾ ವಸತಿ ನಿಲಯ, ವಿಜಯಪುರ |
| 34 | ಗದಗ ಜಿಲ್ಲೆ | ಕ್ರೀಡಾ ವಸತಿ ನಿಲಯ, ಗದಗ |

## ಅನುಬಂಧ-02

## ವಿದ್ಯಾರ್ಥಿಗಳಲ್ಲಿ ಕ್ರೀಡೆಯನ್ನು ಪ್ರೋತ್ಸಾಹಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಕೈಗೊಂಡಿರುವ ಕ್ರಮಗಳ ವಿವರ

1. **ಕ್ರೀಡಾ ವಸತಿ ಶಾಲೆ/ನಿಲಯ:**

ರಾಜ್ಯದಾದ್ಯಂತ 32 ಕ್ರೀಡಾ ವಸತಿ ನಿಲಯ ಹಾಗೂ 02 ಕ್ರೀಡಾ ವಸತಿ ಶಾಲೆಗಳಿದ್ದು, ವೈಜ್ಞಾನಿಕ ಕ್ರೀಡಾ ತರಬೇತಿ, ಉಚಿತ ಊಟೋಪಹಾರ, ವಸತಿ ಮತ್ತು ಕ್ರೀಡಾ ಸಮವಸ್ತ್ರಗಳನ್ನು ಒದಗಿಸಲಾಗುತ್ತಿದೆ.

2. **ಕ್ರೀಡಾ ಸಾಧಕರಿಗೆ ನಗದು ಪುರಸ್ಕಾರ:**

ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

| ಕ್ರ.ಸಂ. | ವಿವರ | ಚಿನ್ನದ ಪದಕ | ಬೆಳ್ಳಿಯ ಪದಕ | ಕಂಚಿನ ಪದಕ |
|---|---|---|---|---|
| 1 | ಒಲಂಪಿಕ್ಸ್ | 6.00 ಕೋಟಿ | 4.00 ಕೋಟಿ | 3.00 ಕೋಟಿ |
| 2 | ಏಷಿಯನ್ ಗೇಮ್ಸ್ | 35.00 ಲಕ್ಷ | 25.00 ಲಕ್ಷ | 15.00 ಲಕ್ಷ |
| 3 | ಕಾಮನ್‌ವೆಲ್ತ್ ಗೇಮ್ಸ್ | 35.00 ಲಕ್ಷ | 25.00 ಲಕ್ಷ | 15.00 ಲಕ್ಷ |
| 4 | ವಿಶ್ವ ಕಪ್/ಚಾಂಪಿಯನ್ ಶಿಪ್ | 5.00 ಲಕ್ಷ | 3.00 ಲಕ್ಷ | 2.00 ಲಕ್ಷ |
| 5 | ನ್ಯಾಷನಲ್ ಗೇಮ್ಸ್ | 5.00 ಲಕ್ಷ | 3.00 ಲಕ್ಷ | 2.00 ಲಕ್ಷ |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 ಲಕ್ಷ | 1.00 ಲಕ್ಷ | 50,000 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 50,000 | 25,000 | 15,000 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 25,000 | 15,000 | 10,000 |

3. **'ಗುರಿ: ಒಲಿಂಪಿಕ್ ಪದಕ' ಕಾರ್ಯಕ್ರಮ:**

ರಾಜ್ಯದ ಅತ್ಯಂತ ಪ್ರತಿಭಾನ್ವಿತ 60 ಕ್ರೀಡಾಪಟುಗಳನ್ನು ಗುರುತಿಸಿ, 2028 ರ ಒಲಿಂಪಿಕ್ಸ್ ತಯಾರಿಗೆ ವಾರ್ಷಿಕ ತಲಾ ರೂ 10.00 ಲಕ್ಷ ಪ್ರೋತ್ಸಾಹ ಧನ ನೀಡಲಾಗುವುದು. ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯ ಉನ್ನತಾಧಿಕಾರ ಸಮಿತಿಯು ಈಗಾಗಲೇ 60 ಕ್ರೀಡಾಪಟುಗಳನ್ನು ಆಯ್ಕೆ ಮಾಡಿದ್ದು, ಸರ್ಕಾರದ ಆದೇಶ ಹೊರಡಿಸಲಾಗಿದ್ದು, ಆಯಾ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ತಲಾ ರೂ 10.00 ಲಕ್ಷದಂತೆ ಒಟ್ಟಾರೆ ರೂ 6.00 ಕೋಟಿ ಪ್ರೋತ್ಸಾಹಧನ ಬಿಡುಗಡೆ ಮಾಡಲು ಕ್ರಮ ವಹಿಸಲಾಗಿದೆ.

4. **ಶೈಕ್ಷಣಿಕ ಶುಲ್ಕ ಮರುಪಾವತಿ:**

ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ವಾರ್ಷಿಕ ಗರಿಷ್ಠ ರೂ 50,000/- ವರೆಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ. 2025-26 ನೇ ಸಾಲಿನಲ್ಲಿ ಇದುವರೆಗೆ 271 ಕ್ರೀಡಾಪಟುಗಳಿಗೆ ಒಟ್ಟು 96.46 ಲಕ್ಷ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗಿದೆ.

5. **ಕ್ರೀಡಾ ವಿದ್ಯಾರ್ಥಿವೇತನ:**

ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಪದಕ ವಿಜೇತರಾದ ಹಾಗೂ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ 10,000 ವಿದ್ಯಾರ್ಥಿವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. 2025-26 ನೇ ಸಾಲಿನಲ್ಲಿ 470 ಕ್ರೀಡಾಪಟುಗಳಿಗೆ ಒಟ್ಟು 47.00 ಲಕ್ಷ ವಿದ್ಯಾರ್ಥಿವೇತನ ಈಗಾಗಲೇ ಪಾವತಿಸಲಾಗಿದೆ.

6. **ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ:**

ಅಂತರ-ರಾಷ್ಟ್ರೀಯ ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ವಿಶೇಷ ನಗದು ಪುರಸ್ಕಾರ ನೀಡಲಾಗುತ್ತಿದೆ. ವಿವರ ಇಂತಿದೆ.

| ಕ್ರ.ಸಂ. | ವಿವರಗಳು | ಮೊತ್ತ (ರೂ.ಗಳಲ್ಲಿ) |
|---|---|---|
| 1 | ಅಂತಾರಾಷ್ಟ್ರೀಯ ಪದಕ ವಿಜೇತರಿಗೆ | ರೂ 5.00 ಲಕ್ಷ |
| 2 | ರಾಷ್ಟ್ರೀಯ ಪದಕ ವಿಜೇತರಿಗೆ | ರೂ 3.00 ಲಕ್ಷ |
| 3 | ರಾಜ್ಯ ಮಟ್ಟದಲ್ಲಿ ಸೀನಿಯರ್ ವಿಭಾಗದ ಪದಕ ವಿಜೇತರಿಗೆ | ರೂ 50,000/- |
| 4 | ರಾಜ್ಯ ಮಟ್ಟದಲ್ಲಿ ಜೂನಿಯರ್ ವಿಭಾಗದ ಪದಕ ವಿಜೇತರಿಗೆ | ರೂ 25,000/- |

2025-26ನೇ ಸಾಲಿನಲ್ಲಿ 50 ಪರಿಶಿಷ್ಟ ಜಾತಿಯ ಕ್ರೀಡಾಪಟುಗಳಿಗೆ ರೂ.150.00 ಲಕ್ಷ ಹಾಗೂ 21 ಪರಿಶಿಷ್ಟ ಪಂಗಡದ ಕ್ರೀಡಾಪಟುಗಳಿಗೆ ರೂ.65.00 ಲಕ್ಷಗಳಂತೆ ಒಟ್ಟು 71 ಕ್ರೀಡಾಪಟುಗಳಿಗೆ ಒಟ್ಟಾರೆ ರೂ.215.00 ಲಕ್ಷ ವಿಶೇಷ ನಗದು ಪುರಸ್ಕಾರ ಪಾವತಿ ಮಾಡಲು ಕ್ರಮ ವಹಿಸಲಾಗಿದೆ.

7. **ಕ್ರೀಡಾ ಪ್ರಶಸ್ತಿಗಳು:**

I. **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ 15 ಕ್ರೀಡಾಪಟುಗಳಿಗೆ ಪ್ರತಿ ವರ್ಷ ತಲಾ ರೂ 4.00 ಲಕ್ಷ ನಗದು ಪುರಸ್ಕಾರ ಒಳಗೊಂಡ ರಾಜ್ಯದ ಅತ್ಯುನ್ನತ ಕ್ರೀಡಾ ಪ್ರಶಸ್ತಿಯಾದ ಏಕಲವ್ಯ ಪ್ರಶಸ್ತಿ ನೀಡಲಾಗುತ್ತಿದೆ.

II. **ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ:** ಗ್ರಾಮೀಣ ಮತ್ತು ಪಾರಂಪರಿಕ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾಪಟುಗಳಿಗೆ ತಲಾ ರೂ 2.00 ಲಕ್ಷ ನಗದು ಪುರಸ್ಕಾರ ಒಳಗೊಂಡ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ.

8. **ನಮ್ಮೂರ ಶಾಲೆಗೆ ನಮ್ಮ ಯುವಜನರು:**

ಅಧಿಕೃತ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ರೂಪಿಸುವ ಸರ್ಕಾರಿ ಶಾಲೆಗಳನ್ನು ಪ್ರತಿ ಜಿಲ್ಲೆಗೆ ಒಂದರಂತೆ ಗುರುತಿಸಿ ಆಯ್ಕೆಯಾದ ಶಾಲೆಗೆ ಪ್ರೋತ್ಸಾಹವಾಗಿ ತಲಾ ರೂ 1.00 ಲಕ್ಷದಂತೆ ಸರ್ಕಾರದಿಂದ ಪ್ರೋತ್ಸಾಹಧನವನ್ನು ನೀಡಲಾಗುವುದು.

9. **ಮೂಲಸೌಕರ್ಯಗಳ ಅಭಿವೃದ್ಧಿ:**

ರಾಜ್ಯದಾದ್ಯಂತ ಜಿಲ್ಲಾ ಮತ್ತು ತಾಲ್ಲೂಕು ಹೊರಾಂಗಣ ಕ್ರೀಡಾಂಗಣಗಳು, ಒಳಾಂಗಣ ಕ್ರೀಡಾಂಗಣಗಳು, ಈಜುಕೊಳಗಳು, ಸೈಕ್ಲಿಂಗ್ ವೆಲೋಡ್ರೋಮ್, ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್, ಸಿಂಥೆಟಿಕ್ ಹಾಕಿ ಟರ್ಫ್ ಮತ್ತಿತರ ಕ್ರೀಡಾ ಮೂಲಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

10. **ಕ್ರೀಡಾಕೂಟಗಳ ಆಯೋಜನೆ:**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ವಿದ್ಯಾರ್ಥಿಗಳೂ ಸೇರಿದಂತೆ ಕ್ರೀಡಾಪಟುಗಳಿಗೆ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ನೀಡುವ ಉದ್ದೇಶದಿಂದ ಕೆಳಕಾಣಿಸಿದ ಕ್ರೀಡಾಕೂಟಗಳನ್ನು ಆಯೋಜಿಸುತ್ತಿದೆ.

- **<u>ದಸರಾ ಕ್ರೀಡಾಕೂಟ ಸಿ.ಎಂ. ಕಪ್:</u>** ತಾಲ್ಲೂಕು, ಜಿಲ್ಲೆ ಮತ್ತು ವಿಭಾಗ ಮಟ್ಟದಲ್ಲಿ ಸ್ಪರ್ಧೆಗಳನ್ನು ಆಯೋಜಿಸಿ, ಆಯ್ಕೆಯಾದವರಿಗೆ ಮೈಸೂರು ದಸರಾ ಮಹೋತ್ಸವದ ಸಂದರ್ಭದಲ್ಲಿ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟ ಸಿ.ಎಂ. ಕಪ್ ಆಯೋಜಿಸಲಾಗುತ್ತಿದೆ. ಈ ಕ್ರೀಡಾಕೂಟದಲ್ಲಿ 3,000 ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸುತ್ತಾರೆ. ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ಕಿಟ್ ಹಾಗೂ ನಗದು ಪುರಸ್ಕಾರ ನೀಡಲಾಗುತ್ತಿದೆ.

- **<u>ಮಿನಿ ಕರ್ನಾಟಕ ಕ್ರೀಡಾಕೂಟ:</u>** ಕರ್ನಾಟಕ ಒಲಿಂಪಿಕ್ ಸಂಸ್ಥೆಯ ಸಹಯೋಗದೊಂದಿಗೆ 14 ವರ್ಷ ವಯೋಮಾನದೊಳಗಿನ ಬಾಲಕ:ಬಾಲಕಿಯರಿಗೆ ಪ್ರತಿ ವರ್ಷ ಮಿನಿ ಕರ್ನಾಟಕ ಕ್ರೀಡಾಕೂಟದಲ್ಲಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ. ಸ್ಪರ್ಧೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ಕಿಟ್ ನೀಡಲಾಗುತ್ತಿದೆ.

- **<u>ಕರ್ನಾಟಕ ಕ್ರೀಡಾಕೂಟ:</u>** ಕರ್ನಾಟಕ ಒಲಿಂಪಿಕ್ ಸಂಸ್ಥೆಯ ಸಹಯೋಗದೊಂದಿಗೆ ಕರ್ನಾಟಕ ಕ್ರೀಡಾಕೂಟವನ್ನು ಪ್ರತಿ ವರ್ಷ ಆಯೋಜಿಸಲಾಗುತ್ತಿದ್ದು, 25ಕ್ಕೂ ಹೆಚ್ಚು ಕ್ರೀಡೆಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದೆ. ಜನವರಿ-2026 ರಲ್ಲಿ ಕರ್ನಾಟಕ ಕ್ರೀಡಾಕೂಟವನ್ನು ತುಮಕೂರಿನಲ್ಲಿ ಆಯೋಜಿಸಲಾಗಿದೆ. ಸ್ಪರ್ಧೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ಕಿಟ್ ನೀಡಲಾಗುತ್ತಿದೆ.

II. **<u>ಸಾಧಕ ಕ್ರೀಡಾಪಟುಗಳಿಗೆ ಉದ್ಯೋಗಾವಕಾಶ:</u>**

- **ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್ ಪದಕ ವಿಜೇತರಿಗೆ** ರಾಜ್ಯ ಸರ್ಕಾರದ ಇಲಾಖೆಗಳಲ್ಲಿ **ಗುಂಪು-ಎ ಹುದ್ದೆ ಮತ್ತು ಏಷಿಯನ್ ಗೇಮ್ಸ್, ಪ್ಯಾರಾ ಏಷಿಯನ್ ಗೇಮ್ಸ್, ಕಾಮನ್‌ವೆಲ್ತ್ ಗೇಮ್ಸ್‌ಗಳಲ್ಲಿ ಪದಕ ವಿಜೇತ ಕ್ರೀಡಾಪಟುಗಳಿಗೆ** ರಾಜ್ಯ ಸರ್ಕಾರದ ಇಲಾಖೆಗಳಲ್ಲಿ, **ಗುಂಪು-ಬಿ** ಮತ್ತು ಇತರೆ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲಾಗುತ್ತಿದೆ.

- ಪೊಲೀಸ್ ಇಲಾಖೆಯಲ್ಲಿ ಕ್ರೀಡಾ ಸಾಧಕರಿಗೆ 3% ಮೀಸಲಾತಿ ಜಾರಿಗೊಳಿಸಲಾಗಿದೆ.

## ಅನುಬಂಧ-3

## ರಾಜ್ಯದ ವಿದ್ಯಾರ್ಥಿಗಳಲ್ಲಿ ಕ್ರೀಡೆಗಳನ್ನು ಪ್ರೋತ್ಸಾಹಿಸಲು 2025-26ನೇ ಸಾಲಿನ ನೂತನ ಯೋಜನೆಗಳ ವಿವರಗಳು:

- 2025-26ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಯೋಗದಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 100 ಸರ್ಕಾರಿ ಶಾಲೆಗಳಲ್ಲಿ ಕ್ರೀಡಾ ಅಂಕಣಗಳನ್ನು ನಿರ್ಮಿಸಲಾಗುತ್ತಿದೆ. ಈ ಶಾಲೆಗಳಲ್ಲಿ ಕ್ರೀಡಾ ಸಾಮಗ್ರಿಗಳನ್ನು ಒದಗಿಸಲು ತಲಾ ರೂ.1.50 ಲಕ್ಷದಂತೆ ಒಟ್ಟಾರೆ ರೂ.150.00 ಲಕ್ಷ ಅನುದಾನವನ್ನು ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲಾಗಿದೆ.
- 2025-26ನೇ ಸಾಲಿನ ಆಯವ್ಯಯ ಕಂಡಿಕೆ 392ರಲ್ಲಿ ಗುರಿ-ಒಲಿಂಪಿಕ್ ಪದಕ ಯೋಜನೆಯಡಿ ರಾಜ್ಯದ ಅತ್ಯಂತ ಪ್ರತಿಭಾನ್ವಿತ 60 ಕ್ರೀಡಾಪಟುಗಳನ್ನು ಗುರುತಿಸಿ, ಒಲಂಪಿಕ್ಸ್- 2028ಕ್ಕೆ ತಯಾರಿ ಕೈಗೊಳ್ಳಲು ವಾರ್ಷಿಕ ತಲಾ 10 ಲಕ್ಷ ರೂ.ನಂತೆ ಪ್ರೋತ್ಸಾಹ ಧನವನ್ನು ಮೂರು ವರ್ಷ ನೀಡಲಾಗುವುದು. ಈ ವರ್ಷಕ್ಕೆ 6 ಕೋಟಿ ರೂ. ಒದಗಿಸಲಾಗುವುದು ಎಂದು ಘೋಷಿಸಲಾಗಿದ್ದು, ಅದರಂತೆ 60 ಕ್ರೀಡಾ ಪಟುಗಳನ್ನು ಗುರುತಿಸಿ ಆದೇಶ ಹೊರಡಿಸಲಾಗಿದೆ.
- ಕಂಡಿಕೆ-396ರಲ್ಲಿ ರಾಜ್ಯದ ನಾಲ್ಕು ವಿಭಾಗಗಳಲ್ಲಿ ತಲಾ ಒಂದರಂತೆ ಜಿಲ್ಲಾ ಕ್ರೀಡಾಂಗಣಗಳಲ್ಲಿ ಶೂಟಿಂಗ್ ರೇಂಜ್‌ಗಳನ್ನು ಮುಂದಿನ ಮೂರು ವರ್ಷಗಳಲ್ಲಿ ಒಟ್ಟು 3 ಕೋಟಿರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ಘೋಷಿಸಲಾಗಿದ್ದು, ತುಮಕೂರು, ಚಿಕ್ಕಮಗಳೂರು, ಬೆಳಗಾವಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಪ್ರಥಮ ಬಾರಿಗೆ 25ಮೀಟರ್ ಶೂಟಿಂಗ್ ರೇಂಜ್ ನಿರ್ಮಿಸಲು ಕ್ರಮಕೈಗೊಳ್ಳಲಾಗುತ್ತಿದೆ.
- ಕಂಡಿಕೆ -397 ರಲ್ಲಿ ಗ್ರಾಮೀಣ ಕ್ರೀಡೆಗಳಾದ ಕಂಬಳ, ಎತ್ತಿನಬಂಡಿ ಓಟ ಮತ್ತು ಮಲ್ಲಕಂಭ ಕ್ರೀಡೆಗಳಿಗೆ ಉತ್ತೇಜನ ನೀಡಲಾಗುವುದು. ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗೆ ಪ್ರತಿ ವರ್ಷ ಕ್ರೀಡಾಕೂಟ ಆಯೋಜಿಸಲಾಗುವುದು 2025-26ನೇ ಸಾಲಿನಲ್ಲಿ ಈ ಉದ್ದೇಶಕ್ಕೆ 2 ಕೋಟಿ ರೂ. ಒದಗಿಸಲಾಗುವುದು ಎಂದು ಘೋಷಿಸಲಾಗಿದ್ದು, ಅದರಂತೆ, ದಕ್ಷಿಣ ಕನ್ನಡ ಜಿಲ್ಲೆಯ 16 ಮತ್ತು ಉಡುಪಿ ಜಿಲ್ಲೆಯ 4 ಕಂಬಳ ಸಂಸ್ಥೆಗಳಿಗೆ ಕಂಬಳ ಕ್ರೀಡೆಯನ್ನು ಆಯೋಜಿಸಲು ತಲಾ ರೂ 2.00 ಲಕ್ಷಗಳಂತೆ ಒಟ್ಟು 20 ಸಂಘ-ಸಂಸ್ಥೆಗಳಿಗೆ ಅನುದಾನವನ್ನು ಸಂಬಂಧಿಸಿದ ಜಿಲ್ಲೆ ಸಹಾಯಕ ನಿರ್ದೇಶಕರು, ಯುಸಕ್ರೀಇ ಇವರಿಗೆ ಬಿಡುಗಡೆ ಮಾಡಲಾಗಿದೆ. 2025-26ನೇ ಸಾಲಿನಲ್ಲಿ ಮೂರು ಜಿಲ್ಲೆಗಳಲ್ಲಿ ಯಾದಗಿರಿ, ಧಾರವಾಡ ಮತ್ತು ಬೆಂಗಳೂರು ನಗರ ಜಿಲ್ಲೆಯಲ್ಲಿ ಮಲ್ಲಕಂಭ ಕ್ರೀಡೋತ್ಸವನ್ನು ಆಯೋಜಿಸಲಾಗುತ್ತಿದ್ದು, ಈ 3 ಜಿಲ್ಲೆಗಳಲ್ಲಿ ತಲಾ ರೂ 10.00 ಲಕ್ಷಗಳಂತೆ **ಒಟ್ಟು ರೂ 30.00 ಲಕ್ಷಗಳ ವೆ**ಚ್ಚದಲ್ಲಿ ಆಯೋಜಿಸಲು ಅನುಮತಿ ನೀಡಿದೆ. ಎತ್ತಿನ ಬಂಡಿ ಓಟ ಕ್ರೀಡೆಯನ್ನು ಆಯೋಜಿಸಲು ಎಲ್ಲಾ ಜಿಲ್ಲೆಗಳಿಂದ ಸಂಘಗಳ ಬಗ್ಗೆ ಮಾಹಿತಿ ಸ್ವೀಕರಿಸಲಾಗಿದ್ದು 15 ಸಂಘಗಳನ್ನು ಆಯ್ಕೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.
- ಕಂಡಿಕೆ-399ರಲ್ಲಿ ಮೈಸೂರು ಮತ್ತು ಬೆಳಗಾವಿಯಲ್ಲಿ ಹೊಸದಾಗಿ ಕ್ರೀಡಾ ವಿಜ್ಞಾನ ಕೇಂದ್ರಗಳನ್ನು 7.00 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ.
- ಕಂಡಿಕೆ-405ರಲ್ಲಿ ಒಲಂಪಿಕ್ಸ್, ಕಾಮನ್‌ವೆಲ್ತ್ ಹಾಗೂ ಏಷಿಯನ್ ಗೇಮ್ಸ್‌ಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳ ಸೇವೆಯನ್ನು ವಿವಿಧ ಕ್ರೀಡಾ ಸಂಸ್ಥೆಗಳಲ್ಲಿ ಮಾರ್ಗದರ್ಶಕರಾಗಿ ಪಡೆಯಲಾಗುವುದು ಎಂದು ಘೋಷಿಸಿದ್ದು, ಅದರಂತೆ ಶ್ರೀ ಪ್ರಕಾಶ್ ಪಿ ಎನ್,ಒಲಿಂಪಿಯನ್, ಬೆಂಗಳೂರು ಇವರನ್ನುಒಂದು ವರ್ಷದ ಅವಧಿಗೆನೇಮಕ ಮಾಡಲಾಗಿದ್ದು, ವಿದ್ಯಾನಗರ ತರಬೇತಿ ಕೇಂದ್ರಕ್ಕೆ ನಿಯೋಜಿಸಲಾಗಿದೆ.